ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯೀ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ: 11 – 02 –2022ರ ನಡವಳಿಗಳು

ವಿಷಯದ ಸಂಖ್ಯೆ: 526/2021–22

ಪ್ರಸ್ತಾವನೆ :

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ 2021–22ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ–3075ರ ಅಭಿವೃದ್ಧಿ ಕಾಮಗಾರಿ ಯೋಜನೆಯಡಿ Improvements of roads, development of Parks and construction of Buildings in ward no -01,02,03 & 04 of Yelahanka Division Under 2021-22 District Minister Grants (Package No 15) ಎಂಬ ಕಾಮಗಾರಿಗೆ ಅಂದಾಜು ಮೊತ್ತ ರೂ.970.00 ಲಕ್ಷಗಳಿಗೆ ಜಾಬ್ ಸಂಖ್ಯೆ ನಿರೀಕ್ಷಿಸಿ ಟೆಂಡರ್ ಆಹ್ವಾನಿಸಲಾಗಿರುತ್ತದೆ.

ಸದರಿ ಕಾಮಗಾರಿಯನ್ನು ಕೈಗೊಳ್ಳಲು ರೂ.970.00 ಲಕ್ಷಗಳಿಗೆ 2018–19ನೇ ಸಾಲಿನ ಲೋಕೋಪಯೋಗಿ ಇಲಾಖೆ ಮತ್ತು ಅನುಮೋದಿತ ದರಗಳ ದರಪಟ್ಟಿಯಂತೆ ಅಂದಾಜು ಪಟ್ಟಿಯನ್ನು ತಯಾರಿಸಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಸಾರ್ವಜನಿಕ ಸೇವಾ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿದ್ದರಿಂದ ಸಕ್ಷಮ ಪ್ರಾಧಿಕಾರದಿಂದ ಆಡಳಿತಾತ್ಮಕ ಮಂಜೂರಾತಿಯನ್ನು ನಿರೀಕ್ಷಿಸಿ ಕಾರ್ಯಪಾಲಕ ಅಭಿಯಂತರರು, ಯಲಹಂಕ ವಿಭಾಗ ರವರು ದಿನಾಂಕ: 15–12–2021 ರಂದು ಟೆಂಡರ್ ಆಹ್ವಾನಿಸಿರುತ್ತಾರೆ.

ಸದರಿ ಕಾಮಗಾರಿಯ ಟೆಂಡರ್‌ಗೆ ಸಂಬಂಧಿಸಿದಂತೆ ತಾಂತ್ರಿಕ ಬಿಡ್ ಅನ್ನು ದಿನಾಂಕ: 04–01–2022 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರಾದ 1) Sri K Lakshmi Narayana Reddy 2) Sri Gopireddy ರವರು ಭಾಗವಹಿಸಿದ್ದು, ತಾಂತ್ರಿಕವಾಗಿ ಅರ್ಹರಾಗಿರುವ ಬಿಡ್ದುದಾರರ ಆರ್ಥಿಕ ಬಿಡ್ ಅನ್ನು ತೆರೆಯಲು ಮುಖ್ಯ ಅಭಿಯಂತರರು ಯಲಹಂಕ ವಲಯ ರವರು ಅನುಮೋದಿಸಿರುವಂತೆ ದಿನಾಂಕ:20–01–2022 ರಂದು ಆರ್ಥಿಕ ಬಿಡ್ ಅನ್ನು ತೆರೆಯಲಾಗಿದ್ದು, ವಿವರ ಕೆಳಕಂಡಂತೆ ಇರುತ್ತದೆ.

ಕ್ರ ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ ರೂ:	ಗುತ್ತಿಗೆದಾರರು ನಮೂದಿಸಿರುವ ದರಗಳು ರೂ:	ಟೆಂಡರ್‌ಗಿಟ್ಟ ಮೊತ್ತಕ್ಕೆ ಹೊಲಿಸಿದಾಗ ಶೇಕಡವಾರು	ದರ ಸಂದಾನದ ನಂತರ ಗುತ್ತಿಗೆದಾರರು ನಮೂದಿಸಿರುವ ದರಗಳು ರೂ:
01	Sri K Lakshmi Narayana Reddy	8,51,03,961.79	8,93,12,169.87	(+)4.94%	8,92,74,055.92 (+4.90%)
02	Sri Gopireddy		9,04,16,448.33	(+)6.24%	-

ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿದೆ.

1. ಪ್ರಸ್ತಾಪಿತ ಕಾಮಗಾರಿಗಳ ಸ್ಥಳ ಪರಿವೀಕ್ಷಣೆ ಮಾಡಿ ಕಾಮಗಾರಿಯ ಅವಶ್ಯಕತೆ ಬಗ್ಗೆ ಹಾಗೂ ಸದರಿ ಕಾಮಗಾರಿಯನ್ನು ಪಾಲಿಕೆಯ ಹಿಂದಿನ ಆಯವ್ಯಯಗಳಲ್ಲಿ/ ಅನುದಾನಗಳಲ್ಲಿ ಕೈಗೊಂಡಿಲ್ಲದೆ ಇರುವ ಮತ್ತು ಮನಾರಾವರ್ತನೆಯಾಗದೇ ಇರುವುದನ್ನು ಖಚಿತ ಪಡಿಸಿಕೊಳ್ಳುವುದು.
2. ಕಾಮಗಾರಿಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ: ಮುಲಅ/ಆಯವ್ಯ/2019-20/ಪಿಆರ್/11/2018-19 ದಿನಾಂಕ:12.06.2019 ಮತ್ತು ಆಯುಕ್ತರು ರವರ ಆಂತರಿಕ ಕಛೇರಿ ಟಿಪ್ಪಣಿ ಸಂಖ್ಯೆ:ಬಿಬಿಎಂಪಿ/ಅ/ಪಿಆರ್/5287/2019-20, ದಿನಾಂಕ: 05.11.2019 ಮತ್ತು ಬಿಬಿಎಂಪಿ/ಪಿ/ಪಿಆರ್/6166/2019-20, ದಿನಾಂಕ:13.12.2019 ರಲ್ಲಿನ ನಿರ್ದೇಶನಗಳನ್ನು/ ಪ್ರಕ್ರಿಯೆಗಳನ್ನು ಅನುಸರಿಸತಕ್ಕದ್ದು.
3. ಕಾಮಗಾರಿಗು ಮುನ್ನ ಹಾಗೂ ನಂತರದ ಜಿ.ಪಿ.ಎಸ್‌ಯುಳ್ಳ ಛಾಯಾ ಚಿತ್ರಗಳನ್ನು ಸಲ್ಲಿಸತಕ್ಕದ್ದು.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.970.00 ಲಕ್ಷಗಳಿಗೆ ಬಿ.ಬಿ.ಎಂ.ಪಿ ಕೌನ್ಸಿಲ್ ಸಭೆಯ ಆಡಳಿತಾತ್ಮಕ ಅನುಮೋದನೆಯನ್ನು ನಿರೀಕ್ಷಿಸಿ ಟೆಂಡರ್ ಅಹ್ವಾನಿಸಲಾಗಿರುವುದರಿಂದ, ಘಟನ್ನೋತ್ತರ ಆಡಳಿತಾತ್ಮಕ ಅನುಮೋದನೆ. ಸದರಿ ಕಾಮಗಾರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ತುರ್ತಾಗಿ ಕೈಗೊಳ್ಳಬೇಕಾಗಿರುವುದರಿಂದ ಗುತ್ತಿಗೆದಾರರಾದ Sri.K.Lakshmi Narayana Reddy ರವರು ನಮೂದಿಸಿರುವ ದರ ಸಂದಾನದ ಮೊತ್ತವಾದ ರೂ.8,92,74,055.92 ಗಳನ್ನು ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇ.(+)4.90% ರಷ್ಟು ಅಧಿಕ ಟೆಂಡರ್ ಪ್ರಿಮಿಯಂಗೆ (2018-19ನೇ ಸಾಲಿನ ಎಸ್.ಆರ್. ದರಪಟ್ಟಿಯಂತೆ) ಅನುಮೋದನೆ ನೀಡಲು ಕೋರುತ್ತಾ, ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರ ಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯೀ ಸಮಿತಿ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ತೀರ್ಮಾನಕ್ಕಾಗಿ ಮಾನ್ಯ ಆಡಳಿತಗಾರರ ಮುಂದೆ ಮಂಡಿಸಿರುವ ವಿಶೇಷ ಆಯುಕ್ತರು (ಆಡಳಿತ) ಹಾಗೂ ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ:04-02-2022ರ ಟಿಪ್ಪಣಿ.

ತೀರ್ಮಾನ: ವಲಯ ಆಯುಕ್ತರು (ಯಲಹಂಕ) ರವರ ದಿನಾಂಕ: 04-02-2022ರ ಟಿಪ್ಪಣಿಯನ್ನು ಒಪ್ಪಿದೆ.

(ರಾಕೇಶ್ ಸಿಂಗ್)
ಆಡಳಿತಗಾರರು